ADDL. COMMISSIONER OF COMMERCIAL TAXES (ENFORCEMENT) SOUTH ZONE, BANGALORE
ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು (ಜಾರಿ), ದಕ್ಷಿಣ ವಲಯ, ಬೆಂಗಳೂರು

BH 9-7-25

## ಪತ್ರಿಕಾ ಪ್ರಕಟಣೆ

ಅರ್ಹವಲ್ಲದ ಖೊಟ್ಟಿ ಹೂಡುವಳಿ ತೆರಿಗೆಯನ್ನು ಕ್ಲೇಮು ಮಾಡಿ ಸರ್ಕಾರದ ತೆರಿಗೆ ರಾಜಸ್ವದ ಮೇಲೆ ಪರಿಣಾಮ ಉಂಟು ಮಾಡುವ ನೀಚ ಕೃತ್ಯದಲ್ಲಿ ತೊಡಗಿರುವ ಖೊಟ್ಟಿ ಬಿಲ್ ಟ್ರೇಡರ್‌ಗಳ ವಿರುದ್ಧ ಕರ್ನಾಟಕ ವಾಣಿಜ್ಯ ತೆರಿಗೆಗಳ ಇಲಾಖೆಯು ತನ್ನ ಅವಿರತ ಕ್ರಮಗಳನ್ನು ಮುಂದುವರೆಸಿರುತ್ತದೆ.

ಬೆಂಗಳೂರಿನ ಜಾರಿ ದಕ್ಷಿಣ ವಲಯ ಹಾಗೂ ಜಾಗೃತಿ ವಿಭಾಗಗಳ ಅಧಿಕಾರಿಗಳ ತಂಡವು ಬೆಂಗಳೂರು ಪೂರ್ವ ಪೋಲಿಸ್ ತಂಡದ ಸಹಯೋಗದೊಂದಿಗೆ ರಾಜಸ್ಥಾನದ ಜಲೋರ್ ಜಿಲ್ಲೆಯ ನಿವಾಸಿಯಾದ ಶ್ರೀ ಕೈಲಾಶ್ ವಿಶ್ಣೋಯ್ ಎಂಬ ವ್ಯಕ್ತಿಯನ್ನು ಬೆಂಗಳೂರಿನಲ್ಲಿ ಕಸ್ಟಡಿಗೆ ಪಡೆದಿರುತ್ತಾರೆ.

ಶ್ರೀ ಕೈಲಾಶ್ ವಿಶ್ಣೋಯ್ ಎಂಬ ವ್ಯಕ್ತಿಯು ನಕಲಿ ಆಧಾರ್ ಕಾರ್ಡ್‌ಗಳನ್ನು ಬಳಸಿ ಬ್ಯಾಂಕ್ ಖಾತೆಗಳನ್ನು ತೆರೆದು, ಜಿಎಸ್‌ಟಿ ನೋಂದಣಿಗಳನ್ನು ಪಡೆದು, ಇವುಗಳನ್ನು ಉಪಯೋಗಿಸಿ ನೂರಾರು ಕೋಟಿಗಳ ಮೊತ್ತದ ಟ್ಯಾಕ್ಸ್ ಇನ್ವಾಯ್ಸ್‌ಗಳನ್ನು ನೀಡಿ ಮೆಟಲ್ ಸ್ಕ್ರಾಪ್ ಸರಕುಗಳ ರಹಸ್ಯ ಸಾಗಾಣಿಕೆಗೆ ಸಹಕರಿಸಿ, ಆ ಮೂಲಕ ಖೊಟ್ಟಿ ಹೂಡುವಳಿ ತೆರಿಗೆಯನ್ನು ಕ್ಲೇಮು ಮಾಡಲು ಕರ್ನಾಟಕ ಮತ್ತು ಇತರೆ ರಾಜ್ಯಗಳ ವರ್ತಕರೊಂದಿಗೆ ಅಕ್ರಮವಾಗಿ ಕೈಜೋಡಿಸಿದ್ದು ಸರ್ಕಾರಕ್ಕೆ ರಾಜಸ್ವ ನಷ್ಟ ಉಂಟುಮಾಡುತ್ತಿದ್ದನು. ಈ ವ್ಯಕ್ತಿಯನ್ನು ಬೆಂಗಳೂರಿನ ವಿಶೇಷ ಆರ್ಥಿಕ ನ್ಯಾಯಾಲಯವು ಮುಂದಿನ ವಿಚಾರಣೆಗಾಗಿ ವಾರೆಂಟ್ ಮೂಲಕ ಇಲಾಖೆಯ ವಶಕ್ಕೆ ನೀಡಿರುತ್ತದೆ.

ವಾಣಿಜ್ಯ ತೆರಿಗೆಗಳ ಇಲಾಖೆಯ ಅಧಿಕಾರಿಗಳು ತನಿಖೆಯನ್ನು ಮುಂದುವರೆಸಿದ್ದು, ಪ್ರಕರಣವನ್ನು ಎಲ್ಲಾ ಆಯಾಮಗಳಿಂದ ವಿಶ್ಲೇಷಿಸಲಾಗುತ್ತಿದೆ. ವಾಣಿಜ್ಯ ತೆರಿಗೆಗಳ ಇಲಾಖೆಯ ಈ ದೃಢವಾದ ಕ್ರಮಗಳು, ನ್ಯಾಯವನ್ನು ಎತ್ತಿ ಹಿಡಿಯುವ, ಸಮಾನ ತೆರಿಗೆ ವ್ಯವಸ್ಥೆಯನ್ನು ಖಾತ್ರಿ ಪಡೆಸುವ ಹಾಗೂ ರಾಜ್ಯದ ಮತ್ತು ಅದರ ಪ್ರಾಮಾಣಿಕ ತೆರಿಗೆದಾರರ ಹಿತಾಸಕ್ತಿಯನ್ನು ಕಾಪಾಡುವ ಸರ್ಕಾರದ ಅಚಲವಾದ ಬದ್ಧತೆಯ ಬಗ್ಗೆ ಸ್ಪಷ್ಟವಾದ ಸಂದೇಶವನ್ನು ನೀಡುತ್ತವೆ.

ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು (ಜಾರಿ)
ದಕ್ಷಿಣ ವಲಯ, ಬೆಂಗಳೂರು.

ವಾಣಿಜ್ಯ ತೆರಿಗೆಗಳ ಅಪರ ಆಯುಕ್ತರು
(ಜಾರಿ), ದಕ್ಷಿಣ ವಲಯ, ಬೆಂಗಳೂರು